# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯ ಯೋಜನೆಗಳಿಗೆ 2021-22ನೇ ಸಾಲಿನಲ್ಲಿ ಒದಗಿಸಿರುವ ಆಯವ್ಯಯದಲ್ಲಿ ಮೂರನೇ ತ್ರೈಮಾಸಿಕ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: MWD 159 MDS 2021 ದಿನಾಂಕ:12.04.2021
2. ಆರ್ಥಿಕ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2021, ದಿನಾಂಕ:05-04-2021.
3. ಸರ್ಕಾರದ ಆದೇಶ ಸಂಖ್ಯೆ: MWD 159 MDS 2021 ದಿನಾಂಕ:27.04.2021 &01.07.2021
4. ಆರ್ಥಿಕ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2021, ದಿನಾಂಕ:30-09-2021.
5. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ವ್ಯವಸ್ಥಾಪಕ ನಿರ್ದೇಶಕರು, ಕೆ.ಎಂ.ಡಿ.ಸಿ., ಮುಖ್ಯಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ, ನಿಬಂಧಕರು, ಕರ್ನಾಟಕ ಉರ್ದು ಅಕಾಡಮಿ ಇವರುಗಳ ಪ್ರಸ್ತಾವನೆಗಳು.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯಲ್ಲಿ 2020-21ನೇ ಸಾಲಿನಲ್ಲಿ ಚಾಲ್ತಿಯಲ್ಲಿದ್ದ ಯೋಜನಾ ಕಾರ್ಯಕ್ರಮಗಳನ್ನು 2021-22ನೇ ಸಾಲಿನವರೆಗೆ ಮುಂದುವರೆಸಿ ಸರ್ಕಾರದ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಆರ್ಥಿಕ ಇಲಾಖೆಯು 2021-22ನೇ ಸಾಲಿನ ಆಯವ್ಯಯದಲ್ಲಿ ನಿಗದಿಪಡಿಸಲಾದ ಅನುದಾನದಲ್ಲಿ ಶೇ.25.%ರಷ್ಟು ಅನುದಾನವನ್ನು ನಿಗಧಿತ ಕಾಲದಲ್ಲಿ ಸಂಬಂಧಪಟ್ಟ ಇಲಾಖೆಯವರು ವೆಚ್ಚ ಮಾಡಲು ಅನುಮತಿ ನೀಡಿ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿ ಆರ್ಥಿಕ ಇಲಾಖೆಯು ಅನುಮತಿ ನೀಡಿರುವಂತೆ 2021-22ನೇ ಸಾಲಿನ ಆಯವ್ಯಯದಲ್ಲಿ ನಿಗಧಿಪಡಿಸಲಾದ ಅನುದಾನದಲ್ಲಿ ಶೇ:25 ರಷ್ಟು ಮೊದಲನೇ & ಎರಡನೇ ತ್ರೈಮಾಸಿಕ ಕಂತಿನ ಅನುದಾನವಾಗಿ ಅಧೀನ ಇಲಾಖೆಗಳಿಗೆ ಬಿಡುಗಡೆ ಮಾಡಿ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರಲ್ಲಿ ಆರ್ಥಿಕ ಇಲಾಖೆಯು 2021-22ನೇ ಸಾಲಿನ ಆಯವ್ಯಯದಲ್ಲಿ ನಿಗದಿಪಡಿಸಲಾದ ಅನುದಾನದಲ್ಲಿ ಶೇ.25.%ರಷ್ಟು ಮೂರನೇ ತ್ರೈಮಾಸಿಕ ಕಂತಿನ ಅನುದಾನವನ್ನು ನಿಗಧಿತ ಕಾಲದಲ್ಲಿ ಸಂಬಂಧಪಟ್ಟ ಇಲಾಖೆಯವರು ವೆಚ್ಚ ಮಾಡಲು ಅನುಮತಿ ನೀಡಿ ಆದೇಶ ಹೊರಡಿಸಲಾಗಿದೆ.

........2

ಮೇಲೆ ಓದಲಾದ ಕ್ರಮ ಸಂಖ್ಯೆ (5)ರಲ್ಲಿ 2021-22ನೇ ಸಾಲಿನ ಆರ್ಥಿಕ ವರ್ಷದಲ್ಲಿ ಒದಗಿಸಲಾಗಿರುವ ಆಯವ್ಯಯದಲ್ಲಿ ಆರ್ಥಿಕ ಇಲಾಖೆಯು ಖಜಾನೆ-2 ನಲ್ಲಿ ಬಿಡುಗಡೆ ಮಾಡಿರುವಂತೆ ಮೂರನೇ ತ್ರೈಮಾಸಿಕ ಕಂತಿನ ಶೇ.25%ರಷ್ಟು **(ಅಕ್ಟೋಬರ್, ನವೆಂಬರ್ & ಡಿಸೆಂಬರ್-2021)** ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಅಧೀನ ಇಲಾಖೆರವರು ಸರ್ಕಾರಕ್ಕೆ ಪ್ರಸ್ತಾವನೆಗಳನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಗಳನ್ನು ಹಾಗೂ 2021-22ನೇ ಸಾಲಿನ ಆರ್ಥಿಕ ವರ್ಷದಲ್ಲಿ ಒದಗಿಸಲಾಗಿರುವ ಆಯವ್ಯಯದ ಅನುದಾನದಲ್ಲಿ ಮೂರನೇ ತ್ರೈಮಾಸಿಕ ಕಂತು ಶೇ:25% ರಷ್ಟು ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ ಪರಿಶೀಲಿಸಲಾಗಿದ್ದು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: MWD 159 MDS 2021, ಬೆಂಗಳೂರು ದಿನಾಂಕ: 22.10.2021.**

ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯಲ್ಲಿ 2021-22ನೇ ಆರ್ಥಿಕ ಸಾಲಿನಲ್ಲಿ ಮುಂದುವರೆಸಲಾಗಿರುವ ಈ ಕೆಳಕಂಡ ಯೋಜನೆಗಳಿಗೆ ಮಂಜೂರಾಗಿರುವ ಆಯವ್ಯಯದಲ್ಲಿ ಮೂರನೇ ತ್ರೈಮಾಸಿಕ ಕಂತಾಗಿ ಆರ್ಥಿಕ ಇಲಾಖೆಯು ಈಗಾಗಲೇ **ಖಜಾನೆ-2 ರಲ್ಲಿ ಬಿಡುಗಡೆ ಮಾಡಿರುವ ಶೇ.25%ರಷ್ಟು** ಅನುದಾನವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಬಿಡುಗಡೆ ಮಾಡಿ ಆದೇಶಿಸಿದೆ.

**2021-22ನೇ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಿವಿಧ ಕಾರ್ಯಕ್ರಮಗಳಿಗೆ ಒದಗಿಸಿದ ಆಯವ್ಯಯ ಹಾಗೂ ಬಿಡುಗಡೆ ಮಾಡಲಾದ 3ನೇ ಕಂತಿನ ಅನುದಾನ**

| ಕ್ರ. ಸಂ | ಯೋಜನೆಗಳ ವಿವರ | ಲೆಕ್ಕಶೀರ್ಷಿಕೆ | 2021-22ನೇ ಸಾಲಿನಲ್ಲಿ ಒದಗಿಸಲಾದ ಅನುದಾನ (ರೂ. ಲಕ್ಷಗಳಲ್ಲಿ) | 2021-22ನೇ ಸಾಲಿನಲ್ಲಿ ಈಗಾಗಲೇ ಬಿಡುಗಡೆ ಮಾಡಲಾದ ಮೊದಲನೇ ಕಂತಿನ ಅನುದಾನ (ರೂ.ಲಕ್ಷಗಳಲ್ಲಿ) | 2021-22ನೇ ಸಾಲಿನಲ್ಲಿ ಬಿಡುಗಡೆ ಮಾಡಲಾದ ಎರಡನೇ ಕಂತಿನ ಅನುದಾನ (ರೂ.ಲಕ್ಷಗಳಲ್ಲಿ) | 2021-22ನೇ ಸಾಲಿನಲ್ಲಿ ಬಿಡುಗಡೆ ಮಾಡಲಾದ ಮೂರನೇ ಕಂತಿನ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|---|---|---|
| ಅಲ್ಪಸಂಖ್ಯಾತರ ನಿರ್ದೇಶನಾಲಯ | | | | | | |
| 1 | ನಿರ್ದೇಶನ ಮತ್ತು ಆಡಳಿತ Directorate of Minorities Administration | 2225-04-001-0-03 (002)(003)(011)(014) (015) (020)(021)(034)(041) (051) (052)(059)(071)(195) | 1393.00 | 348.25 | 348.25 | 348.25 |
| 2 | ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿ Development of Christian Community | 2225-04-102-0-04 (059) | 5500.00 | 1375.00 | 1375.00 | 1375.00 |
| 3 | ಜೈನ್, ಬೌದ್ಧ ಮತ್ತು ಸಿಖ್ ಸಮುದಾಯದ ಅಭಿವೃದ್ಧಿ Development of Jain, Buddhist and Sikh Community. | 2225-04-102-0-05 (117) ರೂ.500.00 ಲಕ್ಷ (103) ರೂ.2500.00ಲಕ್ಷ | 3000.00 | 750.00 | 750.00 | 750.00 |

......3